# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103
ದೂರವಾಣಿ : 0816-2254546, 0816-2255598, 0816-2255597ಫ್ಯಾಕ್ಸ್ : 0816-2270719

**ಸಂಖ್ಯೆ: ತುವಿ: ಡಿಇವಿ-02:2018-19/1694** **ದಿನಾಂಕ: 01.08.2018**

**ಸುತ್ತೋಲೆ**

**ವಿಷಯ:** ತುಮಕೂರು ವಿಶ್ವವಿದ್ಯಾನಿಲಯದಲ್ಲಿ NAD (National Academic Depository) ಕುರಿತ ಕಾರ್ಯಾಗಾರದಲ್ಲಿ ಭಾಗವಹಿಸುವ ಕುರಿತು

****

ಭಾರತ ಸರ್ಕಾರದ ವಿದ್ಯುದ್ಮಾನ ಉಪಕ್ರಮವಾದ ರಾಷ್ಟ್ರೀಯ ಶೈಕ್ಷಣಿಕ ಕೋಶ NAD (National Academic Depository) ದೇಶದ ಶೈಕ್ಷಣಿಕ ಸಂಸ್ಥೆಗಳು ನೀಡುವ ಪ್ರಮಾಣಪತ್ರಗಳು, ಡಿಪ್ಲೊಮಾ ಪದವಿ ಹಾಗೂ ಅಂಕಗಳ ಶೇಖರಣಾ ಕೋಶವಾಗಿದೆ. ಭಾರತ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ ಹಾಗೂ ಯುಜಿಸಿಯ ನಿರ್ದೇಶನದಂತೆ, ತುಮಕೂರು ವಿಶ್ವವಿದ್ಯಾನಿಲಯ ಈಗಾಗಲೇ NAD ಅಳವಡಿಸಿಕೊಳ್ಳುವ ಕುರಿತು ಕಾರ್ಯೋನ್ಮುಖವಾಗಿದೆ. ಈ ನಿಟ್ಟಿನಲ್ಲಿ ಯುಜಿಸಿ ಮತ್ತು MHRD ನಿರ್ದೇಶನದಂತೆ, ಕಡ್ಡಾಯವಾಗಿ ತುಮಕೂರು ವಿಶ್ವವಿದ್ಯಾನಿಲಯದಲ್ಲಿ NAD ನ್ನು ಜಾರಿಗೊಳಿಸಬೇಕಾಗಿರುತ್ತದೆ. ಇದಕ್ಕೆ ಸಂಬಂಧಪಟ್ಟಂತೆ ವಿದ್ಯಾರ್ಥಿಗಳ ಸಮಗ್ರ ಮಾಹಿತಿಯನ್ನು ಪ್ರವೇಶ ಸಂದರ್ಭದಲ್ಲಿಯೇ ಪಡೆಯಬೇಕಾಗಿರುತ್ತದೆ. ಈ ಸಂಬಂಧ ತುಮಕೂರು ವಿಶ್ವವಿದ್ಯಾನಿಲಯದ ಸಂಯೋಜನೆಗೆ ಒಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು(ಸಾಧ್ಯವಾದಲ್ಲಿ ತಮ್ಮ ಕಾಲೇಜಿನ ಕಂಪ್ಯೂಟರ್ ಆಪರೇಟರ್‌ನ್ನು ಕರೆತರುವುದು) ವಿವಿಧ ಸ್ನಾತಕೋತ್ತರ ಕೇಂದ್ರಗಳ ಮುಖ್ಯಸ್ಥರು, ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರು ಮತ್ತು ಘಟಕ ಕಾಲೇಜುಗಳ ಪ್ರಾಂಶುಪಾಲರುಗಳು ದಿನಾಂಕ:08.08.2018ರಂದು ಬೆಳಿಗ್ಗೆ 10.00 ಗಂಟೆಗೆ ವಿಶ್ವವಿದ್ಯಾನಿಲಯದ ಡಾ. ಸರ್ ಎಂ. ವಿಶ್ವೇಶರಯ್ಯ ಸಭಾಂಗಣದಲ್ಲಿ ನಡೆಯುವ ಕಾರ್ಯಾಗಾರದಲ್ಲಿ ಕಡ್ಡಾಯವಾಗಿ ಭಾಗವಹಿಸಿ NAD ಮಾಹಿತಿ ಪಡೆಯುವುದು.

ಸದರಿ ಕಾರ್ಯಾಗಾರದಲ್ಲಿ ಯುಜಿಸಿ ಪ್ರಾದೇಶಿಕ ಕೇಂದ್ರ, ಬೆಂಗಳೂರು ಇದರ ಮುಖ್ಯಸ್ಥರಾದ ಡಾ. ಶ್ರೀನಿವಾಸರವರು ಮಾನ್ಯ ಕುಲಪತಿಯವರು, ಮಾನ್ಯ ಕುಲಸಚಿವರು ಹಾಗೂ NAD ಅಧಿಕಾರಿಗಳು ಭಾಗವಹಿಸಲಿದ್ದಾರೆ.

**ಕುಲಸಚಿವರು** 1-8-18

**ಗೆ,**

1. **ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**
2. **ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**
3. **ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**
4. **ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಎಲ್ಲಾ ಮುಖ್ಯಸ್ಥರುಗಳಿಗೆ**
5. **ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ,**
6. **ಸ್ನಾತಕೋತ್ತರ ಕೇಂದ್ರಗಳ ಎಲ್ಲಾ ಮುಖ್ಯಸ್ಥರುಗಳಿಗೆ**

**ಪ್ರತಿಗಳು:**

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಡಾ. ರಮೇಶ್ ಸಾಲಿಯಾನ, ನೋಡೆಲ್ ಅಧಿಕಾರಿಗಳು, National Academic Depository, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಶ್ರೀ ರಾಜೇಶ್ ಶಣೈ, ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಚೇರಿ ಪ್ರತಿ